**ಓ.ಎಸ್. ನಂ. 8/2018** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 15.11.2024 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ಎನ್.ಆರ್ ವಕೀಲರಿಂದಃ**

ಸಾಮಾನ್ಯವಾಗಿ ಯಾವುದೇ ಆಸ್ತಿಯ ನೊಂದಣಿ ಕಛೇರಿಯ ಮೌಲ್ಯ ಮತ್ತು ಮಾರುಕಟ್ಟೆ ಮೌಲ್ಯ ಬೇರೆ ಬೇರೆ ಇರುತ್ತದೆ ಎಂದರೆ ಸರಿ. ನೋಂದಣಿ ಕಛೇರಿಯ ಮೌಲ್ಯಕ್ಕಿಂತ ಮಾರುಕಟ್ಟೆಯ ಮೌಲ್ಯ ಜಾಸ್ತಿ ಇರುತ್ತದೆ ಎಂದರೆ ನನಗೆ ಗೊತ್ತಿರುವುದಿಲ್ಲ. ದಾವಆಸ್ತಿಯ ಮಾರುಕಟ್ಟೆ ಮೌಲ್ಯ 2014 ರಲ್ಲಿ 80 ಲಕ್ಷಕ್ಕಿಂತ ಜಾಸ್ತಿ ಇತ್ತು ಎಂದರೆ ಸರಿಯಲ್ಲ. ಸಾಕ್ಷಿದಾರರು ಮುಂದುವರೆದು 10 ಲಕ್ಷ ಮೌಲ್ಯ ಇತ್ತು ಎನ್ನುವರು. ಅಷ್ಟು ಮೌಲ್ಯದ ಆಸ್ತಿಯನ್ನು ಕೇವಲ 10 ಲಕ್ಷಕ್ಕೆ ಮಾರಾಟ ಮಾಡುವ ಪ್ರಮೇಯ ಇರಲಿಲ್ಲ ಎಂದರೆ ಸರಿಯಲ್ಲ. ದಾವಆಸ್ತಿಗಳಲ್ಲಿ ನೀರಾವರಿ ಸೌಲಭ್ಯ ಇದ್ದು ಪ್ರತಿ ವರ್ಷ 1 ಎಕರೆಗೆ 3 ಲಕ್ಷಕ್ಕಿಂತ ಹೆಚ್ಚಿನ ಆದಾಯವನ್ನು ಪ್ರತಿವಾದಿ ಪಡೆಯುತ್ತಿದ್ದಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಸಂಪೂರ್ಣ ದಾವಆಸ್ತಿಯಲ್ಲಿ ಪ್ರತಿವಾದಿಯರು 10 ಲಕ್ಷಕ್ಕಿಂತ ಜಾಸ್ತಿ ಆದಾಯ ಪಡೆಯುತ್ತಿದ್ದಾರೆ ಎಂದರೆ ನನಗೆ ಗೊತ್ತಿರುವುದಿಲ್ಲ. ಪ್ರತಿವಾದಿಯರಿಂದ ಅಕ್ರಮ ಲಾಭ ಪಡೆಯಲು ನಿಪಿ1 ದಾಖಲೆಯನ್ನು ನಾನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಹಾಗೂ ಪ್ರತಿವಾದಿಯರ ನಡುವೆ ಕೇವಲ ಸಾಲದ ವ್ಯವಹಾರವಾಗಿದ್ದು, ದಾವಆಸ್ತಿಯ ಮಾರಾಟದ ವ್ಯವಹಾರವಾಗಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯರು ಸಾಲದ ಹಣವನ್ನು ಮರು ಪಾವತಿ ಮಾಡಿದ್ದರೂ ಹೆಚ್ಚಿನ ಬಡ್ಡಿಗಾಗಿ ನಾನು ನಿಪಿ1 ನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಈ ದಾವೆಯಲ್ಲಿ ಕೇಳಿರುವ ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ಈ ದಾವೆಗೆ ಯಾವುದೇ ವ್ಯಾಜ್ಯ ಕಾರಣ ಇರುವುದಿಲ್ಲ, ಅದನ್ನು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.